# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST | ಇದು ಸುದ್ದಿ ವಿಳಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 142 | Pages. 2 | Date: 10-05-2026, SUNDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 142 – ಪುಟಗಳು : 2 | 10-05-2026 | ಭಾನುವಾರ | Ph: 8762954248 | ದರ : ₹1


# ಸೌಹಾರ್ದ ಕ್ರಿಕೆಟ್ ಸಮ್ಮಿಲನಕ್ಕೆ ಶುಭ ಚಾಲನೆ

## ಎಲ್ಲ ಕ್ಷೇತ್ರದ ಗಣ್ಯರಿಂದ ಅಪಾರ ಮೆಚ್ಚುಗೆ: ಪತ್ರಕರ್ತರ ಹಾಸನ ಚಾಲೆಂಜರ್ಸ್ ತಂಡ ಉತ್ತಮ ಪ್ರದರ್ಶನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲಾ ಪತ್ರಕರ್ತರ ಸಂಘದ ಆಶ್ರಯದಲ್ಲಿ ನಗರದ ಸರ್ಕಾರಿ ಕಲಾ ಮತ್ತು ವಿಜ್ಞಾನ ಕಾಲೇಜು ಮೈದಾನದಲ್ಲಿ ಹಮ್ಮಿಕೊಂಡಿರುವ ಎರಡು ದಿನಗಳ ಕ್ರಿಕೆಟ್ ಸಮ್ಮಿಲನ ಸೌಹಾರ್ದ ಪಂದ್ಯಾವಳಿಗೆ ಇಂದು ಶುಭ ಚಾಲನೆ ದೊರೆಯಿತು.

ಸ್ಥಳೀಯ ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್, ವಿಧಾನ ಪರಿಷತ್ ಸದಸ್ಯ ಡಾ.ಸೂರಜ್ ರೇವಣ್ಣ, ಅರಕಲಗೂಡು ಶಾಸಕ ಎ.ಮಂಜು. ಎಸ್ಪಿ ಶುಭಾನ್ವಿತಾ ಮೊದಲಾದವರು ಪ್ರತ್ಯೇಕವಾಗಿ ಆಗಮಿಸಿ ಪಂದ್ಯಾವಳಿಗೆ ಶುಭ ಕೋರಿದರು.

ಸ್ಥಳೀಯ ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್ ಮಾತನಾಡಿ, ಸದಾ ಒತ್ತಡದಲ್ಲಿ ಕೆಲಸ ಮಾಡುವ ಪತ್ರಕರ್ತರು, ವಿವಿಧ ಇಲಾಖೆಗಳ ಅಧಿಕಾರಿ ಹಾಗೂ ನೌಕರರು ಒಟ್ಟಾಗಿ ಕಲೆತು ಕ್ರಿಕೆಟ್ ಪಂದ್ಯಾವಳಿ ಆಡುವುದು ಈಗಿನ ಕಾರ್ಯಒತ್ತಡದ ಸಂದರ್ಭದಲ್ಲಿ ಉತ್ತಮ ಬೆಳವಣಿಗೆ ಇದು ಹೀಗೆಯೇ



ಮುಂದುವರಿಯಲಿ ಎಂದು ಆಶಿಸಿದರು.

ಪತ್ರಕರ್ತರು ಮತ್ತು ಅಧಿಕಾರಿಗಳು ತಮ್ಮ ನಿತ್ಯದ ಒತ್ತಡದ ಬದುಕಿನ ನಡುವೆಯೂ ಕ್ರೀಡೆಯಲ್ಲಿ ಭಾಗವಹಿಸಿರುವುದು ಸಂತಸದ ಸಂಗತಿ ಎಂದರು. ಕ್ರೀಡೆಯಲ್ಲಿ ಗೆಲುವು-ಸೋಲು ಮುಖ್ಯವಲ್ಲ; ಎಲ್ಲರೂ ಒಟ್ಟಾಗಿ ಭಾಗವಹಿಸುವ ಮನೋಭಾವವೇ ಮುಖ್ಯ ಎಂದು ತಿಳಿಸಿದರು.

ವಿಧಾನ ಪರಿಷತ್ ಸದಸ್ಯ ಡಾ.ಸೂರಜ್ ರೇವಣ್ಣ ಮಾತನಾಡಿ, ಸಮಾಜದಲ್ಲಿ ಒಗ್ಗಟ್ಟು, ಆರೋಗ್ಯಕರ ಮನೋಭಾವ ಹಾಗೂ ಉತ್ತಮ ಬಾಂಧವ್ಯ ನಿರ್ಮಾಣಕ್ಕೆ



ಕ್ರೀಡೆ ಅತ್ಯುತ್ತಮ ವೇದಿಕೆಯಾಗಿದ್ದು, ಪತ್ರಕರ್ತರ ಮತ್ತು ವಿವಿಧ ಇಲಾಖೆ ಅಧಿಕಾರಿಗಳ ಸೌಹಾರ್ದ ಕ್ರಿಕೆಟ್ ಸಮ್ಮಿಲನ ಉತ್ತಮ ನಡವಳಿಕೆ. ನೂರಾರು ಆಸ್ಪತ್ರೆ ನಿರ್ಮಾಣ ಮಾಡುವುದಕ್ಕಿಂತ ಉತ್ತಮ ಕ್ರೀಡಾಂಗಣ ನಿರ್ಮಿಸಿ ಇಂತಹ ಆಟೋಟಗಳಿಗೆ ವೇದಿಕೆ ಕಲ್ಪಿಸುವುದು ಆರೋಗ್ಯಕರ ಬೆಳವಣಿಗೆ ಎಂದು ಅಭಿಪ್ರಾಯಪಟ್ಟರು.

ಕ್ರೀಡಾಕೂಟ ಆಯೋಜಿಸುವುದು ಕೇವಲ ಮನರಂಜನೆಗಾಗಿ ಅಲ್ಲ. ಅವು ಸಮಾಜಕ್ಕೆ ಉತ್ತಮ ಸಂದೇಶ ನೀಡುವ ವೇದಿಕೆಗಳಾಗಬೇಕು ಎಂದರು. ಜಿಲ್ಲೆಯ ವಿವಿಧ ಇಲಾಖೆಗಳ ಅಧಿಕಾರಿಗಳು, ಪತ್ರಕರ್ತರು ಮತ್ತು ಜನಪ್ರತಿನಿಧಿಗಳನ್ನು ಒಂದೇ ವೇದಿಕೆಯಲ್ಲಿ ಸೇರಿಸಿ ಕ್ರೀಡಾಕೂಟ ನಡೆಸಿರುವುದು ಶ್ಲಾಘನೀಯ ಕಾರ್ಯ. ಇಂತಹ ಕಾರ್ಯಕ್ರಮಗಳು ಪರಸ್ಪರ ಬಾಂಧವ್ಯ ಬೆಳೆಸುವುದರ ಜೊತೆಗೆ ಸಮಾಜಮುಖಿ ಕಾರ್ಯಗಳಿಗೆ ಸಹಕಾರಿ ಆಗುತ್ತವೆ ಎಂದು ತಿಳಿಸಿದರು.

ಇಂದಿನ ಯುವಜನತೆ ಕ್ರೀಡೆಗಳಿಂದ ದೂರವಾಗುತ್ತಿರುವ ಬಗ್ಗೆ ಆತಂಕ ವ್ಯಕ್ತಪಡಿಸಿದ ಅವರು, ಆನ್‌ಲೈನ್ ಗೇಮ್ಸ್, ರಮ್ಮಿ, ಸಾಮಾಜಿಕ ಜಾಲತಾಣಗಳ ಅತಿಯಾದ ಬಳಕೆ ಹಾಗೂ ದುಶ್ಚಟಗಳಿಂದ ಯುವಕರು ದಿಕ್ಕು ತೋಚದ ಪರಿಸ್ಥಿತಿಗೆ ತಲುಪುತ್ತಿದ್ದಾರೆ ಎಂದು ಬೇಸರ ಜೊತೆಗೆ ಆತಂಕತ ಹೊರ ಹಾಕಿದರು.

ಯುವಕರು ಕ್ರೀಡೆಗಳತ್ತ ಹೆಚ್ಚು ಆಸಕ್ತಿ ಬೆಳೆಸಿಕೊಂಡರೆ ದೈಹಿಕ ಮತ್ತು ಮಾನಸಿಕ ಆರೋಗ್ಯ ಉತ್ತಮವಾಗುತ್ತದೆ ಎಂದು ಹೇಳಿದರು.

ನೂರಾರು ಆಸ್ಪತ್ರೆಗಳನ್ನು ನಿರ್ಮಿಸುವುದಕ್ಕಿಂತ ಉತ್ತಮ ಕ್ರೀಡಾಂಗಣ ನಿರ್ಮಿಸಿದರೆ ಸಮಾಜ ಆರೋಗ್ಯವಂತವಾಗುತ್ತದೆ ಎಂಬ ಸ್ವಾಮಿ ವಿವೇಕಾನಂದರ ಮಾತನ್ನು ಸ್ಮರಿಸಿದ ಸೂರಜ್ ರೇವಣ್ಣ, ಕ್ರೀಡೆ ವ್ಯಕ್ತಿತ್ವ ವಿಕಸನಕ್ಕೆ ಮಹತ್ವದ ಪಾತ್ರ ವಹಿಸುತ್ತದೆ ಎಂದು ಕಿವಿಮಾತು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭಾನ್ವಿತಾ ಮಾತನಾಡಿ, ಇಂಥದ್ದೊಂದು ಪಂದ್ಯಾವಳಿ ಆಯೋಜನೆ ಮಾಡಿರುವುದು ನಿಜಕ್ಕೂ ಒಳ್ಳೆಯ ಬೆಳವಣಿಗೆ. ಎಲ್ಲ ಇಲಾಖೆ ಅಧಿಕಾರಿಗಳು ಹಾಗೂ ನೌಕರರು ಒಂದು ಕಡೆ ಸೇರುವುದು ಉತ್ತಮ ಬೆಳವಣಿಗೆ ಎಂದು ಸಂತಸ ಹಂಚಿಕೊಂಡರು.

ಕರ್ನಾಟಕ ರಾಜ್ಯ ಪತ್ರಕರ್ತರ ಸಂಘದ ಉಪಾಧ್ಯಕ್ಷ ಹೆಚ್.ಬಿ. ಮದನಗೌಡ ಮಾತನಾಡಿ, ಪತ್ರಕರ್ತರು ಹಾಗೂ ವಿವಿಧ ಇಲಾಖೆಗಳ ನಡುವೆ ನಡೆಯುತ್ತಿರುವ ಈ ಕ್ರಿಕೆಟ್ ಪಂದ್ಯಾವಳಿ ಆಯೋಜಿಸಿರುವ ಪತ್ರಕರ್ತರ ಸಂಘದ ಈ ವಿನೂತನ ಪ್ರಯತ್ನ ಯಶಸ್ವಿಯಾಗಲಿ ಎಂದು ಹಾರೈಸಿದರು.

ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್. ಕೆಂಚೇಗೌಡ ಮಾತನಾಡಿ, ಅಧಿಕಾರಿಗಳು ಮತ್ತು ಪತ್ರಕರ್ತರ ನಡುವೆ ಉತ್ತಮ ಬಾಂಧವ್ಯ ಬೆಳೆದು ಸಮಾಜಮುಖಿ ಕೆಲಸಗಳಿಗೆ ಇಂತಹ ಕ್ರೀಡಾಕೂಟಗಳು ಪ್ರೇರಣೆಯಾಗಬೇಕು ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಕೆ.ಪಿ.ಎಸ್. ಪ್ರಮೋದ್, ಜಿಲ್ಲಾ ಪತ್ರಕರ್ತರ ಸಂಘದ ಉಪಾಧ್ಯಕ್ಷರಾದ ಎನ್.ನಂಜುಂಡೇಗೌಡ, ಜಿ.ಪ್ರಕಾಶ್, ಮಾಜಿ ಅಧ್ಯಕ್ಷರಾದ ಬಾಳ್ಳುಗೋಪಾಲ್, ಬಿ.ಆರ್.ಉದಯಕುಮಾರ್, ಎಸ್.ಆರ್.ಪ್ರಸನ್ನಕುಮಾರ್, ಲೀಲಾವತಿ, ರವಿನಾಕಲಗೂಡು, ಅತೀಖ್ ಉರ್ ರೆಹಮಾನ್, ಪ್ರಧಾನ ಕಾರ್ಯದರ್ಶಿ ಕೆ.ಜಿ. ಸುರೇಶ್, ಕಾರ್ಯದರ್ಶಿಗಳಾದ ಖುಶ್ವಂತ್, ಕೆ.ಎಂ.ಹರೀಶ್, ಖಜಾಂಚಿ ಪ್ರಕಾಶ್ ಬೆಳವಾಡಿ, ವಿವಿಸಿ ಟಿವಿ ಸಂಪಾದಕ ಜಗದೀಶ್ ಚೌಡುವಳ್ಳಿ, ಎಲ್ಲ ಪದಾಧಿಕಾರಿಗಳು, ಕಾರ್ಯಕಾರಿ ಸಮಿತಿ

> ಅರಕಲಗೂಡು ಕ್ಷೇತ್ರದ ಶಾಸಕ ಎ.ಮಂಜು ಮಾತನಾಡಿ, ರಾಜಕಾರಣಿಗಳು, ಅಧಿಕಾರಿಗಳು ಮತ್ತು ಪತ್ರಕರ್ತರು ಒಂದೇ ವೇದಿಕೆಯಲ್ಲಿ ಸೇರಿ ಕ್ರೀಡಾಕೂಟದಲ್ಲಿ ಪಾಲ್ಗೊಳ್ಳುತ್ತಿರುವುದು ಉತ್ತಮ ಬೆಳವಣಿಗೆ. ಇಂತಹ ಕಾರ್ಯಕ್ರಮಗಳು ಪರಸ್ಪರ ವಿಶ್ವಾಸ ಮತ್ತು ಸ್ನೇಹವನ್ನು ವೃದ್ಧಿಸುವುದರ ಜೊತೆಗೆ ಜಿಲ್ಲೆಯ ಅಭಿವೃದ್ಧಿಗೆ ಸಹಕಾರಿಯಾಗುತ್ತವೆ ಎಂದು ಹೇಳಿದರು. ಕ್ರಿಕೆಟ್ ವಿಶ್ವದಾದ್ಯಂತ ಅಪಾರ ಜನಪ್ರಿಯತೆ ಹೊಂದಿರುವ ಕ್ರೀಡೆ. ಹಾಸನ ಜಿಲ್ಲಾ ಪತ್ರಕರ್ತರು ಸದಾ ಹೊಸತನದ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದ್ದು, ಈ ಕ್ರೀಡಾಕೂಟವೂ ಅದರಲ್ಲಿ ಒಂದಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಹಾಸನ ಜಿಲ್ಲೆಯಲ್ಲಿ ಆರಂಭವಾಗಿರುವ ಪಂದ್ಯಾವಳಿ ಇಡೀ ರಾಜ್ಯದಲ್ಲಿ ಪಸರಿಸಲಿ ಎಂದು ನುಡಿದರು.



ಸದಸ್ಯರು ಹಾಗೂ ವಿವಿಧ ತಾಲೂಕುಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಹಾಜರಿದ್ದರು.

ಈ ನಡುವೆ ಪತ್ರಕರ್ತರ ಹಾಸನ ಚಾಲೆಂಜರ್ಸ್ ತಂಡ, ಲೀಗ್ ಹಂತದಲ್ಲಿ ಎಲ್ಲ ಮೂರು ಪಂದ್ಯಗಳನ್ನು ಗೆಲ್ಲುವ ಮೂಲಕ ಉತ್ತಮ ಪ್ರದರ್ಶನ ನೀಡಿದೆ. ಇಂದಿನ ಪಂದ್ಯಾವಳಿಯಲ್ಲಿ ಹತ್ತಕ್ಕೂ ಇಲಾಖೆಗಳ ತಂಡಗಳು ಭಾಗಿಯಾಗಿದ್ದವು. ನಾಳೆಯೂ ಕ್ರಿಕೆಟ್ ಸಮ್ಮಿಲನ ಮುಂದುವರಿಯಲಿದೆ. ಆಗಮಿಸಿದ್ದ ಎಲ್ಲ ಪತ್ರಕರ್ತರಿಗೂ ತಿಂಡಿ ಹಾಗೂ ಊಟದ ವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ಮಾಡಲಾಗಿತ್ತು.

# ಶ್ರೀ ಕರಿಯಮ್ಮ ದೇವಿ-ಆಂಜನೇಯಸ್ವಾಮಿ

## ಭಕ್ತ ಸಾಗರದ ನಡುವೆ ವೈಭವದ ರಥೋತ್ಸವ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಮಾಡಾಳು: ಅರಸೀಕೆರೆ ತಾಲೂಕಿನ ಕಣಕಟ್ಟೆ ಹೋಬಳಿ ಕಿತ್ತನಕೆರೆ ಗ್ರಾಮದಲ್ಲಿ ಗ್ರಾಮ ದೇವತೆ ಶ್ರೀ ಕರಿಯಮ್ಮ ದೇವಿ ಹಾಗೂ ಶ್ರೀ ಆಂಜನೇಯಸ್ವಾಮಿ ಅವರ ಜಾತ್ರಾ ಮಹೋತ್ಸವ ಭಕ್ತಿ, ಸಂಭ್ರಮ ಮತ್ತು ವೈಭವದ ನಡುವೆ ಅದ್ದೂರಿಯಾಗಿ ನೆರವೇರಿತು.

ಮೇ 2 ರಿಂದ ಆರಂಭವಾದ ಜಾತ್ರಾ ಮಹೋತ್ಸವದಲ್ಲಿ ಶ್ರೀ ಕರಿಯಮ್ಮ ದೇವಿ ಮತ್ತು ಶ್ರೀ ಚೌಡೇಶ್ವರಿ ದೇವಿ ದೇವಾಲಯ ಸೇವಾ ಟ್ರಸ್ಟ್ ಆಶ್ರಯದಲ್ಲಿ ಪ್ರತಿದಿನವೂ ವಿವಿಧ ಧಾರ್ಮಿಕ ಮತ್ತು ಸಾಂಪ್ರದಾಯಿಕ ಕಾರ್ಯಕ್ರಮಗಳು ನಡೆಯುತ್ತಿದ್ದು, ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು. ದೇವಾಲಯವನ್ನು ತಳಿರು ತೋರಣಗಳು, ವಿದ್ಯುತ್ ದೀಪಾಲಂಕಾರಗಳಿಂದ ಅಲಂಕರಿಸಲಾಗಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವರ ದರ್ಶನ ಪಡೆದರು.

ಜಾತ್ರಾ ಅಂಗವಾಗಿ ಶ್ರೀ ಆಂಜನೇಯಸ್ವಾಮಿಗೆ 101 ಕಡೆ ಸೇವೆ,

ಶ್ರೀ ಕರಿಯಮ್ಮ ದೇವಿಗೆ ಮಧುವಣಿಗೆ ಶಾಸ್ತ್ರ, ಮುತ್ತಿನ ವಾಹನೋತ್ಸವ, ಧ್ವಜಾರೋಹಣ, ಬಾನದ ಕಾರ್ಯಕ್ರಮ, ಬೇವಿನ ಸೀರೆ ಉತ್ಸವ, ಆನೆ ಉತ್ಸವ, ಸಿರಿ ಕಾರ್ಯಕ್ರಮ ಹಾಗೂ ಬೆಳ್ಳಿ ರಥೋತ್ಸವ ಸೇರಿದಂತೆ ಹಲವು ಧಾರ್ಮಿಕ ವಿಧಿ ವಿಧಾನಗಳನ್ನು ಸಂಪ್ರದಾಯಬದ್ಧವಾಗಿ ನೆರವೇರಿಸಲಾಯಿತು.

ಶುಕ್ರವಾರ ಮಧ್ಯಾಹ್ನ 12.35ಕ್ಕೆ ನಡೆದ ಮಹಾರಥೋತ್ಸವ ಜಾತ್ರೆಯ ಪ್ರಮುಖ ಆಕರ್ಷಣೆಯಾಗಿತ್ತು. ಬಾಣಾವಾರ, ಕಿತ್ತನಕೆರೆ ಸೇರಿದಂತೆ ಸುತ್ತಮುತ್ತಲಿನ 12 ಹಳ್ಳಿಗಳ ಗ್ರಾಮಸ್ಥರು ಹಾಗೂ ಸಾವಿರಾರು ಭಕ್ತರು ಭಾಗವಹಿಸಿ ಭಕ್ತಿಭಾವದಿಂದ ರಥ ಎಳೆಯುವ ಮೂಲಕ ತಮ್ಮ ಹರಕೆ ಸಮರ್ಪಿಸಿದರು.

ಜೈ ಕರಿಯಮ್ಮ ಹಾಗೂ ಜೈ ಆಂಜನೇಯ ಎಂಬ ಘೋಷಣೆಗಳು ಮೊಳಗುತ್ತಿದ್ದು, ಇಡೀ ಗ್ರಾಮ ಭಕ್ತಿ ಸಾಗರದಲ್ಲಿ ತೇಲಿದಂತಾಯಿತು.


ಮಹಾರಥೋತ್ಸವದ ಬಳಿಕ ಭಕ್ತಾದಿಗಳಿಗೆ ಮಹಾ ದಾಸೋಹ ವ್ಯವಸ್ಥೆ ಮಾಡಲಾಗಿದ್ದು, ಸಾವಿರಾರು ಭಕ್ತರು ಪ್ರಸಾದ ಸ್ವೀಕರಿಸಿದರು. ಸಂಜೆ ನಡೆದ ಉಯ್ಯಾಲೋತ್ಸವ ಭಕ್ತರ ಅದ್ದೂರಿ ಮಣೆವು ಗಮನ ಸೆಳೆಯಿತು.

# ಬಿ.ಎಸ್.ದೇಸಾಯಿ ಅವರಿಗೆ ಅಭಿನಂದನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಕರ್ನಾಟಕ ಲಲಿತಾ ಕಲಾ ಅಕಾಡೆಮಿ ವತಿಯಿಂದ ನೀಡಲಾಗುವ ಗೌರವ ಪ್ರಶಸ್ತಿಗೆ ಪಾತ್ರರಾಗಿರುವ ಖ್ಯಾತ ಚಿತ್ರ ಕಲಾವಿದರು ಹಾಗೂ ಹಾಸನ ಜಿಲ್ಲಾ ಪಕ್ಷಿ ವೀಕ್ಷಕರ ಸಂಘದ ಅಧ್ಯಕ್ಷರಾದ ಶ್ರೀ ಬಿ.ಎಸ್. ದೇಸಾಯಿ ಅವರಿಗೆ ಜಿಲ್ಲಾ ಪಕ್ಷಿ ವೀಕ್ಷಕರ ಸಂಘದ ಪದಾಧಿಕಾರಿಗಳು ಮತ್ತು ಕಾರ್ಯಕಾರಿಣಿ ಸಮಿತಿ ಸದಸ್ಯರ ಪರವಾಗಿ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಗಿದೆ.

ಚಿತ್ರಕಲೆಯ ಕ್ಷೇತ್ರದಲ್ಲಿ ವಿಶಿಷ್ಟ ಸಾಧನೆ ಮಾಡಿರುವ ಶ್ರೀ ಬಿ.ಎಸ್. ದೇಸಾಯಿ ಅವರು, ಪಕ್ಷಿ ಅಧ್ಯಯನದಲ್ಲಿಯೂ ತೊಡಗಿಸಿಕೊಂಡಿದ್ದು, ಪಕ್ಷಿಗಳು ಮತ್ತು ಪರಿಸರದ ಛಾಯಾಚಿತ್ರಣದಲ್ಲೂ ತಮ್ಮದೇ ಆದ ಗುರುತನ್ನು ಮೂಡಿಸಿದ್ದಾರೆ. ಇವರಿಗೆ ಈ



ಗೌರವ ಪ್ರಶಸ್ತಿ ಸಂದಿರುವುದು ಹಾಸನ ಜಿಲ್ಲೆಯ ಎಲ್ಲಾ ಪಕ್ಷಿ ಪ್ರೇಮಿಗಳು ಮತ್ತು ಕಲಾಭಿಮಾನಿಗಳಿಗೆ ಹೆಮ್ಮೆಯ ಸಂಗತಿಯಾಗಿದೆ. ಈ ಕುರಿತು ಹಾಸನ ಜಿಲ್ಲಾ ಪಕ್ಷಿ ವೀಕ್ಷಕರ ಸಂಘದ ಗೌರವಾಧ್ಯಕ್ಷರಾದ ಹೆಚ್.ಪಿ. ಮೋಹನ್ ಅವರು ಸಂತೋಷ ವ್ಯಕ್ತಪಡಿಸಿ, ದೇಸಾಯಿ ಅವರ ಸಾಧನೆಗಳು ಇತರರಿಗೆ ಪ್ರೇರಣೆಯಾಗಲಿ ಎಂದು ಕಾರ್ಯದರ್ಶಿ ಬಿ.ಆರ್. ಉದಯಕುಮಾರ್ ಹಾರೈಸಿದ್ದಾರೆ.

# ಬಂಗಾಳದಲ್ಲಿ ಸುವೇಂದು ಸರ್ಕಾರ್

## ಮೊದಲ ಬಿಜೆಪಿ ಸಿಎಂ ಆಗಿ ಪ್ರಮಾಣ ವಚನ: ಪ್ರಧಾನಿ ಸೇರಿ ಹಲವು ಸಾಕ್ಷಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಕೊಲ್ಕತ್ತಾ : ಪಶ್ಚಿಮ ಬಂಗಾಳದ ಮೊದಲ ಬಿಜೆಪಿ ಮುಖ್ಯಮಂತ್ರಿಯಾಗಿ ಸುವೇಂದು ಅಧಿಕಾರಿ ಪ್ರಮಾಣ ವಚನ ಸ್ವೀಕಾರ ಮಾಡಿದರು. ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸೇರಿದಂತೆ ಪ್ರಮುಖ ಎನ್‌ಡಿಎ ನಾಯಕರು ಉಪಸ್ಥಿತರಿದ್ದರು. ಸುವೇಂದ್ರ ಜೊತೆಗೆ ಐವರು ಸಚಿವರು ಕೂಡಾ ಪ್ರಮಾಣ ವಚನ ಸ್ವೀಕರಿಸಿದರು. ಸುವೇಂದ್ರ ಬಂಗಾಳದ 9 ನೇ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದವರಾಗಿದ್ದಾರೆ. ಶನಿವಾರ ಬ್ರಿಗೇಡ್ ಪೆರೇಡ್ ಮೈದಾನದಲ್ಲಿ ನಡೆದ ಭವ್ಯ ಸಮಾರಂಭದಲ್ಲಿ, ರಾಜ್ಯಪಾಲ ಆರ್‌ಎನ್ ರವಿ ಅವರು





ಸುವೇಂದು ಅಧಿಕಾರಿ ಅವರಿಗೆ ಪದವಿ ಮತ್ತು ಗೌಪ್ಯತೆಯ ಪ್ರಮಾಣವಚನ ಬೋಧಿಸಿದರು.

ಸುವೇಂದು ಅಧಿಕಾರಿ ಈ ಹಿಂದೆ ಟಿಎಂಸಿ ಪಕ್ಷದಲ್ಲಿದ್ದರು. ಮಮತಾ ಬ್ಯಾನರ್ಜಿ ಅವರ ಜೊತೆಗೆ ಕೆಲಸ ಮಾಡಿದ್ದರು. ಪಕ್ಷದಲ್ಲಿ ಭಿನ್ನಾಭಿಪ್ರಾಯದ ಕಾರಣಕ್ಕಾಗಿ ಅವರು ಟಿಎಂಸಿ ತೊರೆದು ಬಿಜೆಪಿ ಸೇರ್ಪಡೆಗೊಂಡರು. ರಾಜ್ಯದಲ್ಲಿ ಟಿಎಂಸಿ ಎದುರಾಗಿ ಪಕ್ಷ ಸಂಘಟನೆಯನ್ನು ಮಾಡಿ ಬಲಪಡಿಸಿದರು. ಚುನಾವಣೆಗೂ ಮುನ್ನ ಅವರೇ ಸಿಎಂ ಆಗುತ್ತಾರೆ ಎಂಬ ನಿರೀಕ್ಷೆ ವ್ಯಕ್ತಪಡಿಸಲಾಗಿತ್ತು. ಇದೀಗ ಪಶ್ಚಿಮ ಬಂಗಾಳದ ಮೊದಲ ಬಿಜೆಪಿ ಮುಖ್ಯಮಂತ್ರಿಯಾಗಿ ಅವರು ಅಧಿಕಾರ ಸ್ವೀಕಾರ ಮಾಡಿದ್ದಾರೆ.

ಐವರು ಸಚಿವರು ಸಂಪುಟಕ್ಕೆ: ಸುವೇಂದು ಅಧಿಕಾರಿ ಅವರ ಜೊತೆಗೆ ಐವರು ಸಚಿವರು ಕೂಡಾ ಪ್ರಮಾಣ ವಚನ ಸ್ವೀಕರಿಸಿದರು. ದಿಲೀಪ್ ಘೋಷ್, ಅಗ್ನಿಮಿತ್ರ ಪಾಲ್, ನಿಸಿತ್ ಪ್ರಮಾಣಿಕ್, ಕ್ಷುದಿರಾಮ್ ತುಡು ಮತ್ತು ಅಶೋಕ್ ಕಿರ್ತಾನಿಯಾ ಅವರಿಗೂ ರಾಜ್ಯಪಾಲರಿಂದ ಪ್ರಮಾಣವಚನ ಸ್ವೀಕರಿಸಿದರು.

ದಿಲೀಪ್ ಘೋಷ್ ಪಶ್ಚಿಮ ಬಂಗಾಳದ ಬಿಜೆಪಿಯ ಹಿರಿಯ ನಾಯಕ ಮತ್ತು ರಾಜ್ಯ ಘಟಕದ ಮಾಜಿ ಅಧ್ಯಕ್ಷರು ಆಗಿದ್ದಾರೆ. ಇವರು ಆರ್‌ಎಸ್‌ಎಸ್ ಸಂಘಟನೆಯ ಪೂರ್ಣಾವಧಿ ಪ್ರಚಾರಕರಾಗಿದ್ದರು. 2014ರ ನಂತರ ಬಂಗಾಳದಲ್ಲಿ ಬಿಜೆಪಿ ಪಕ್ಷವನ್ನು ತಳಮಟ್ಟದಲ್ಲಿ ಕಟ್ಟಿ ಬೆಳೆಸುವಲ್ಲಿ ಇವರು ಪ್ರಮುಖ ಪಾತ್ರ ನಿರ್ವಹಿಸಿದ್ದರು.

ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ ಅಗ್ನಿಮಿತ್ರ ಪಾಲ್ 2019 ರಲ್ಲಿ ಬಿಜೆಪಿಗೆ ಸೇರ್ಪಡೆಗೊಂಡಿದ್ದರು. ಒಂದು ವರ್ಷದ ನಂತರ, ಲಾಕೆಟ್ ಚಟರ್ಜಿ ಅವರ ಉತ್ತರಾಧಿಕಾರಿಯಾಗಿ ಮಹಿಳಾ ಮೋರ್ಚಾದ ರಾಜ್ಯ ಅಧ್ಯಕ್ಷರಾಗಿ ಪಕ್ಷ ಸಂಘಟನೆ ಮಾಡಿದ್ದರು. 2021 ರಲ್ಲಿ ಇವರನ್ನು ಬಂಗಾಳ ಬಿಜೆಪಿಯ ಪ್ರಧಾನ ಕಾರ್ಯದರ್ಶಿಯನ್ನಾಗಿ ನೇಮಿಸಲಾಗಿತ್ತು.

2026ರ ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಅಭೂತಪೂರ್ವ ಜಯ ಗಳಿಸಿದೆ. 207 ಸ್ಥಾನಗಳನ್ನು ಗೆಲ್ಲುವ ಮೂಲಕ ತೃಣಮೂಲ ಕಾಂಗ್ರೆಸ್‌ನ 15 ವರ್ಷಗಳ ಆಡಳಿತವನ್ನು ಕಮಲ ಪಡೆ ಅಂತ್ಯಗೊಳಿಸಿದೆ. ಮಮತಾ ಬ್ಯಾನರ್ಜಿ ನೇತೃತ್ವದ ಟಿಎಂಸಿ ಕೇವಲ 80 ಸ್ಥಾನಗಳನ್ನಷ್ಟೇ ಪಡೆಯಲು ಸಾಧ್ಯವಾಯಿತು. ಗಮನಿಸಬೇಕಾದ ವಿಚಾರ ಏನಂದರೆ, ಈ ಬಾರಿಯ ಚುನಾವಣೆಯಲ್ಲಿ ಬಿಜೆಪಿ ದಾಖಲೆ ಮತಗಳನ್ನು ಪಡೆದುಕೊಂಡಿದೆ.

# ನಿಗಮದ ಮಹತ್ವಾಕಾಂಕ್ಷಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಭೋವಿ ಸಮುದಾಯದ ಜನರ ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಅಭಿವೃದ್ಧಿಯನ್ನು ಗುರಿಯಾಗಿಸಿಕೊಂಡು ಕಾರ್ಯನಿರ್ವಹಿಸುತ್ತಿರುವ ನಿಗಮ ರಾಜ್ಯದಾದ್ಯಂತ ವಿವಿಧ ಮಹತ್ವಾಕಾಂಕ್ಷಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಕರ್ನಾಟಕ ಬೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ. ರಾಮಪ್ಪ ತಿಳಿಸಿದ್ದಾರೆ

ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ಇಂದು ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು ಹಾಸನ ಜಿಲ್ಲೆಯಲ್ಲಿ ನೂರಾರು ಫಲಾನುಭವಿಗಳಿಗೆ ಲಕ್ಷಾಂತರ ರೂಪಾಯಿ ನೆರವು ನೀಡುವ ಮೂಲಕ





ಸಮುದಾಯದ ಸಬಲೀಕರಣಕ್ಕೆ ಪ್ರಮುಖ ಪಾತ್ರವಹಿಸಲಾಗುತ್ತಿದೆ ಎಂದು ತಿಳಿಸಿದರು.

ಸಮುದಾಯಕ್ಕೆ ಯೋಜನೆಗಳನ್ನು ಹೆಚ್ಚುವರಿ ಮಾಡುವ ನಿಟ್ಟಿನಲ್ಲಿ ರಾಜ್ಯಾದ್ಯಂತ 11 ಜಿಲ್ಲಾ ಭೋವಿ ಅಭಿವೃದ್ಧಿ ನಿಗಮದ ಕಚೇರಿಗಳಿದ್ದು ಇನ್ನು ಕೆಲವು ಜಿಲ್ಲೆಗಳಲ್ಲಿ ಬೇಡಿಕೆ ಇರುವ ಕಾರಣ ಶಾಖಾ ಕಚೇರಿಗಳನ್ನು ತೆರೆಯಲು ಹಾಗೂ ಹೆಚ್ಚುವರಿ ನೌಕರರ ಆಯ್ಕೆಗೆ ಸಂಬಂಧಪಟ್ಟಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ ಎಂದರು.

ಭೋವಿ ಸಮುದಾಯದ ಮಹಿಳೆಯರನ್ನು ಸಬಲೀಕರಣ ಗೊಳಿಸಲು ಉಚಿತ ಟೈಲರಿಂಗ್ ಶಿಬಿರಗಳಲ್ಲಿ ಉಚಿತವಾದ ತರಬೇತಿ ಹಾಗೂ ಸರ್ಟಿಫಿಕೇಟ್ ಜೊತೆಗೆ ಉಚಿತ ಹೊಲಿಗೆ ಯಂತ್ರವನ್ನು ಮಹಿಳೆಯರಿಗೆ ನೀಡಬೇಕೆಂಬ ನಿರ್ಧಾರವನ್ನು ತೆಗೆದುಕೊಂಡಿದ್ದೇವೆ ಎಂದು ತಿಳಿಸಿದರು. ವಡ್ಡರು ಮಾಡುವಂತಹ ಕುಲಕಸುಬುಗಳಿಗೆ ತೊಂದರೆ ನೀಡಬಾರದು ಎಂದು ಅಧಿಕಾರಿಗಳಿಗೆ ಸೂಚನೆಯನ್ನು ನೀಡಿರುವುದಾಗಿ ತಿಳಿಸದರಲ್ಲದೆ, ಗಂಗಾ ಕಲ್ಯಾಣ ಯೋಜನೆ ಅಡಿ ಮೇ ಮತ್ತು ಜೂನ್ ತಿಂಗಳ ಒಳಗಾಗಿ ಕೊಳವೆ ಬಾವಿ ಕೊರೆಯಲು ಕ್ರಮವಹಿಸಿ ವಿದ್ಯುತ್ ಸಂಪರ್ಕ ಕಲ್ಪಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದರು.


ಹೈನುಗಾರಿಕೆ ಮಾಡುವಲ್ಲಿ ಉತ್ತೇಜನವನ್ನು ನೀಡುಬೇಕು ಹಾಗೂ ಮಹಿಳಾ ಮತ್ತು ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಸೌಲಭ್ಯಗಳನ್ನು ಕಲ್ಪಿಸಿ ಕೊಡಲು ಅಧಿಕಾರಿಗಳಳಿಗೆ ಸೂಚನೆಯನ್ನು ನೀಡಿದ್ದೇವೆ ಎಂದರು. ಮಹಿಳಾ ಸ್ವಸಹಾಯ ಸಂಘಗಳ ರಚನೆ ಮಾಡುವುದರಲ್ಲಿ ಕುಟುಂಬಗಳು ಆರ್ಥಿಕವಾಗಿ ಮತ್ತು ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದುತ್ತದೆ, ಈ ಸಭೆಯ ಮೂಲ ಉದ್ದೇಶ ಮಹಿಳೆಯರನ್ನು ಸ್ವಾವಲಂಬಿಯನ್ನಾಗಿ ಮಾಡುವುದಾಗಿರುತ್ತದೆ ಎಂದು ತಿಳಿಸಿದರು.

# ಸಾವಿರಾರು ಭಕ್ತರ ಸಮ್ಮುಖದಲ್ಲಿ ಬೂವನಹಳ್ಳಿ ದೇವಿರಮ್ಮ ದಿವ್ಯ ರಥೋತ್ಸವಕ್ಕೆ ಚಾಲನೆ

## ಶಂಭುನಾಥ ಸ್ವಾಮೀಜಿ, ಶಾಸಕ ಹೆಚ್.ಪಿ. ಸ್ವರೂಪ್, ಡಿಸಿ ಲತಾಕುಮಾರಿ ಭಾಗಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಸಮೀಪದ ಬೂವನಹಳ್ಳಿ ಗ್ರಾಮದಲ್ಲಿ ಹತ್ತು ವರ್ಷಕ್ಕೊಮ್ಮೆ ನಡೆಯುವ ಐತಿಹಾಸಿಕ ಶ್ರೀ ದೇವಿರಮ್ಮ ಅಮ್ಮನವರ ಜಾತ್ರಾ ಮಹೋತ್ಸವದ ಅಂಗವಾಗಿ ಶ್ರೀ ಆದಿಚುಂಚನಗಿರಿ ಶಾಖಾ ಮಠದ ಮಠಾಧೀಶರಾದ ಶ್ರೀ ಶಂಭುನಾಥ ಸ್ವಾಮೀಜಿ, ಕ್ಷೇತ್ರದ ಶಾಸಕ ಹೆಚ್.ಪಿ. ಸ್ವರೂಪ್, ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಮಾಜಿ ಶಾಸಕ ಪ್ರೀತಂಗೌಡ ಅವರ ಪತ್ನಿ ಕಾವ್ಯ ಪ್ರೀತಂಗೌಡ, ತಹಸೀಲ್ದಾರ್ ಗೀತಾ ಸೇರಿದಂತೆ ಹಲವು ಗಣ್ಯರು ದೇವಿರಮ್ಮ ಅಮ್ಮನವರ ದಿವ್ಯ ರಥೋತ್ಸವಕ್ಕೆ ವಿಶೇಷ ಪೂಜೆ ಸಲ್ಲಿಸಿ ಚಾಲನೆ ನೀಡಿದರು. ಪೂಜೆ ಬಳಿಕ ಮಂಗಳವಾದ್ಯಗಳ ನಾದ, ಡೊಳ್ಳು ಕುಣಿತ, ಭಜನಾ ತಂಡಗಳ ಗಾಯನ ಹಾಗೂ ಜಯಘೋಷಗಳ ನಡುವೆ ರಥೋತ್ಸವ ಆರಂಭಗೊಂಡಿತು.



ಅಲಂಕೃತ ರಥದಲ್ಲಿ ದೇವಿರಮ್ಮ ಅಮ್ಮನವರ ಉತ್ಸವ ಮೂರ್ತಿಯನ್ನು ಪ್ರತಿಷ್ಠಾಪಿಸಲಾಗಿದ್ದು, ರಥವು ಮೂಲಸ್ಥಾನದಿಂದ ಗ್ರಾಮ ಬೀದಿಗಳಲ್ಲಿ ಸಂಚರಿಸಿತು. ಮಾರ್ಗದುದ್ದಕ್ಕೂ ಭಕ್ತರು ಆರತಿ ಬೆಳಗಿ ದೇವಿಗೆ ಪೂಜೆ ಸಲ್ಲಿಸಿದರು. ಮಹಿಳೆಯರು ಕಳಶ ಹಿಡಿದು ಸ್ವಾಗತ ಕೋರಿದರೆ, ಯುವಕರು ಭಕ್ತಿಗೀತೆಗಳೊಂದಿಗೆ ರಥ ಎಳೆದು ಭಕ್ತಿ ಸಮರ್ಪಿಸಿದರು. ಗ್ರಾಮದೆಲ್ಲೆಡೆ ವಿದ್ಯುತ್ ದೀಪಾಲಂಕಾರ, ತೋರಣಗಳು ಹಾಗೂ ಪುಷ್ಪಾಲಂಕಾರಗಳಿಂದ ಕಂಗೊಳಿಸುತ್ತಿತ್ತು. ಜಾತ್ರೆಯ ಹಿನ್ನೆಲೆಯಲ್ಲಿ ಸುತ್ತಮುತ್ತಲಿನ ಹನ್ನೆರಡಕ್ಕೂ ಹೆಚ್ಚು ಗ್ರಾಮಗಳಿಂದ ಭಕ್ತರು ಆಗಮಿಸಿದ್ದು, ದೇವಾಲಯ ಆವರಣದಲ್ಲಿ ಭಕ್ತ ಸಾಗರವೇ ಹರಿದುಬಂದಿತ್ತು. ಕೆಲವರು ಕುಟುಂಬ ಸಮೇತರಾಗಿ ಹರಕೆ ತೀರಿಸಿದರೆ, ಹಲವರು ದೇವಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ಭಕ್ತರಿಗೆ ಕುಡಿಯುವ ನೀರು, ಅನ್ನಸಂತರ್ಪಣೆ ಹಾಗೂ ವಿವಿಧ ಸೌಲಭ್ಯಗಳನ್ನು ಕಲ್ಪಿಸಲಾಗಿತ್ತು. ರಥೋತ್ಸವದ ನಂತರ ನಡೆದ ಮಹಾಮಂಗಳಾರತಿಯಲ್ಲಿ ಸಾವಿರಾರು ಭಕ್ತರು ಭಾಗವಹಿಸಿ ದೇವಿಯ ಕೃಪೆಗೆ ಪಾತ್ರರಾದರು. ಬಳಿಕ ಭಕ್ತರಿಗೆ ಮಹಾಪ್ರಸಾದ ವಿತರಿಸಲಾಯಿತು. ದೇವಾಲಯದ ಆವರಣದಲ್ಲಿ ಭಕ್ತರ ಭಜನೆ, ಪೂಜಾ ವಿಧಿಗಳು ಹಾಗೂ ಧಾರ್ಮಿಕ ಕಾರ್ಯಕ್ರಮಗಳು ದಿನಪೂರ್ತಿ ನಡೆಯುತ್ತಿದ್ದು, ಜಾತ್ರೆ ಧಾರ್ಮಿಕತೆಯ ಜೊತೆಗೆ ಗ್ರಾಮೀಣ ಸಂಸ್ಕೃತಿಯ ಪ್ರತೀಕವಾಗಿ ಮೆರೆಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಹೆಚ್.ಪಿ. ಸ್ವರೂಪ್, ಬೂವನಹಳ್ಳಿ ದೇವಿರಮ್ಮ ಜಾತ್ರೆ ನಮ್ಮ ಭಾಗದ ಜನರ ನಂಬಿಕೆ ಮತ್ತು ಭಕ್ತಿಯ ಪ್ರತೀಕವಾಗಿದೆ. ಹತ್ತು ವರ್ಷಕ್ಕೊಮ್ಮೆ ನಡೆಯುವ ಈ ಮಹೋತ್ಸವಕ್ಕೆ ಸಾವಿರಾರು ಭಕ್ತರು ಆಗಮಿಸುತ್ತಾರೆ. ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಮೊದಲ ದಿನವೇ ಆಗಮಿಸಿ ವಿಶೇಷ ಪೂಜೆ ಸಲ್ಲಿಸಿರುವುದು ಜಾತ್ರೆಯ ವಿಶೇಷತೆಯನ್ನು ಹೆಚ್ಚಿಸಿದೆ. ದೇವಿರಮ್ಮ ತಾಯಿ ಎಲ್ಲರಿಗೂ ಆರೋಗ್ಯ, ಸಮೃದ್ಧಿ ಹಾಗೂ ಶಾಂತಿ ನೀಡಲಿ ಎಂದು ಹೇಳಿದರು.

ಶ್ರೀ ಶಂಭುನಾಥ ಸ್ವಾಮೀಜಿ ಮಾತನಾಡಿ, ಗ್ರಾಮೀಣ ಭಾಗದ ಧಾರ್ಮಿಕ ಆಚರಣೆಗಳು ಸಮಾಜದಲ್ಲಿ ಭಕ್ತಿ, ಸಂಸ್ಕೃತಿ ಹಾಗೂ ಒಗ್ಗಟ್ಟನ್ನು ಬೆಳೆಸುತ್ತವೆ. ದೇವಿರಮ್ಮ ಅಮ್ಮನವರ ಆಶೀರ್ವಾದದಿಂದ ಜನರಲ್ಲಿ ಸುಖ-ಶಾಂತಿ ನೆಲೆಸಲಿ'' ಎಂದು ಆಶೀರ್ವಚನ ನೀಡಿದರು.

ಇ ಾತ್ರಾ ಮಹೋತ್ಸವದ ಅಂಗವಾಗಿ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದ್ದು, ರಾತ್ರಿ ವೇಳೆ ವಿಶೇಷ ಸಂಗೀತ ಕಾರ್ಯಕ್ರಮ ಹಾಗೂ ಭಜನಾ ಕಾರ್ಯಕ್ರಮಗಳು ಭಕ್ತರನ್ನು ಆಕರ್ಷಿಸಿತು. ಗ್ರಾಮದಲ್ಲಿ ಪೊಲೀಸ್ ಬಿಗಿ ಭದ್ರತೆ ಏರ್ಪಡಿಸಲಾಗಿತ್ತು. ಆರೋಗ್ಯ ಇಲಾಖೆ, ಗ್ರಾಮ ಪಂಚಾಯಿತಿ ಹಾಗೂ ವಿವಿಧ ಸಂಘಟನೆಗಳ ಸಹಯೋಗದಲ್ಲಿ ಅಗತ್ಯ ವ್ಯವಸ್ಥೆಗಳನ್ನು ಮಾಡಲಾಗಿತ್ತು.

ಈ ವೇಳೆ ಮಾಜಿ ಶಾಸಕ ಬಿ.ವಿ. ಕರೀಗೌಡ, ಶರತ್, ಹಾಸನ ಜಿಪಂ ಮಾಜಿ ಅಧ್ಯಕ್ಷ ಸ್ವಾಮಿಗೌಡ, ತಾಪಂ ಮಾಜಿ ಸದಸ್ಯ ಬಿ.ಇ. ಜಯರಾಂ, ಕಂಚಮಾರನಹಳ್ಳಿ ಕಾತರಾಜು, ಬೂವನಹಳ್ಳಿ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಬಿ.ಆರ್. ಬೊಮ್ಮೇಗೌಡ, ಶಿವರಾಮೇಗೌಡ, ಹರೀಶ್, ಮಂಜುನಾಥ್, ರವಿ, ದುರ್ಗಾಪ್ರಸಾದ್, ಸ್ವಾಮಿ, ಮಲ್ಲೇಶ್, ಕರಿಯಯ್ಯ, ಲಕ್ಷ್ಮಣ್ ಸೇರಿದಂತೆ ಹಲವು ಮುಖಂಡರು ಹಾಗೂ ಸಾವಿರಾರು ಭಕ್ತರು ಉಪಸ್ಥಿತರಿದ್ದರು.

# KPS ಮ್ಯಾಗ್ನೆಟ್ ಯೋಜನೆಗೆ ಹಾಸನದ ಪೋಷಕರ ವಿರೋಧ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರಾಜ್ಯ ಸರ್ಕಾರದ 'ಕೆಪಿಎಸ್ ಮ್ಯಾಗ್ನೆಟ್' (KPS Magnet) ಯೋಜನೆಯಡಿ ಸ್ಥಳೀಯ ಶಾಲೆಗಳನ್ನು ಬೇರೆಡೆಗೆ ಸಂಯೋಜಿಸುವುದನ್ನು ವಿರೋಧಿಸಿ ಹಾಸನ ಜಿಲ್ಲೆಯ ಅರಸೀಕೆರೆ ಮತ್ತು ಗೊರೂರು ಭಾಗದ ಪೋಷಕರು ಬೃಹತ್ ಹೋರಾಟ ಸಂಘಟಿಸಿದ್ದಾರೆ. ತಮ್ಮ ಮಕ್ಕಳನ್ನು ದೂರದ ಶಾಲೆಗಳಿಗೆ ಕಳುಹಿಸಲು ಸಾಧ್ಯವಿಲ್ಲ ಎಂದು ಪೋಷಕರು ಸಹಿ ಮಾಡಿದ ಪತ್ರಗಳನ್ನು ಸಾರ್ವಜನಿಕ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸಲ್ಲಿಸುವ ಮೂಲಕ ಯೋಜನೆಯ ವಿರುದ್ಧ ಪ್ರತಿರೋಧ ವ್ಯಕ್ತಪಡಿಸಿದ್ದಾರೆ.

ನಗರದ ಮಹಾರಾಜ ಪಾರ್ಕ್‌ನಲ್ಲಿ ಈ ಕುರಿತು ಮಾಹಿತಿ ಹಂಚಿಕೊಂಡ AIDSO ಜಿಲ್ಲಾಧ್ಯಕ್ಷರಾದ ಚೈತ್ರ, ಕಳೆದ ಏಳು ತಿಂಗಳಿನಿಂದ ಈ ಯೋಜನೆಯ ವಿರುದ್ಧ ರಾಜ್ಯಾದ್ಯಂತ ಜನಾಗ್ರಹ ವ್ಯಕ್ತವಾಗುತ್ತಿದೆ ಎಂದು ತಿಳಿಸಿದರು.

ದೂರದ ಪ್ರಯಾಣದ ಸಮಸ್ಯೆ: ಅರಸೀಕೆರೆ ತಾಲೂಕಿನ ಡಿ.ಎಂ. ಕುರ್ಕೆ ಕೆಪಿಎಸ್ ಶಾಲೆಗೆ ಸಂಯೋಜಿಸಲು ಉದ್ದೇಶಿಸಿರುವ ಹೆಚ್.ಎಲ್.ಬಿ ತಾಂಡ್ಯ, ಮಾಡಾಳು, ಹರಳಕಟ್ಟ ಸೇರಿದಂತೆ ವಿವಿಧ ಗ್ರಾಮಗಳ ಪೋಷಕರು, ಸಣ್ಣ ವಯಸ್ಸಿನ ಮಕ್ಕಳನ್ನು ಪ್ರತಿದಿನ ದೂರದ ಊರುಗಳಿಗೆ ಕಳುಹಿಸುವುದು ಅಸಾಧ್ಯ ಎಂದು ತಿಳಿಸಿದ್ದಾರೆ.

ಸ್ಥಳೀಯ ಶಾಲೆಗಳ ಉಳಿವು: "ನಾವು ದಿನಗೂಲಿ ನೌಕರರು, ನಮ್ಮೂರಿನ ಶಾಲೆಯಲ್ಲೇ ಮಕ್ಕಳಿಗೆ ಶಿಕ್ಷಣ ಸಿಗಬೇಕು" ಎಂದು ಪೋಷಕರು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಯೋಜನೆಯ ಸ್ವರೂಪ: ಸರ್ಕಾರವು 'ಮ್ಯಾಗ್ನೆಟ್' ಯೋಜನೆಯ ಹೆಸರಿನಲ್ಲಿ ಬಡವರ ಮಕ್ಕಳ ಶಿಕ್ಷಣದ ಹಕ್ಕನ್ನು ಕಸಿದುಕೊಳ್ಳುತ್ತಿದೆ ಮತ್ತು ಈ ಮೂಲಕ ಹಳ್ಳಿ ಶಾಲೆಗಳನ್ನು ಮುಚ್ಚುವ ಹುನ್ನಾರ ನಡೆಸುತ್ತಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದ್ದಾರೆ.

ಹಾಸನದ ಪೋಷಕರು ಪತ್ರ ಚಳವಳಿಯ ಮೂಲಕ ತೋರಿರುವ ಹಾದಿಯು ರಾಜ್ಯದ ಇತರ ಭಾಗಗಳಿಗೆ ಮಾದರಿಯಾಗಿದೆ ಎಂದು AIDSO ಅಭಿಪ್ರಾಯಪಟ್ಟಿದೆ. "ನಮ್ಮೂರ ಶಾಲೆ ಉಳಿಸಿ" ಆಂದೋಲನವನ್ನು ಪ್ರತಿ ಹಳ್ಳಿಗಳಿಗೂ ವಿಸ್ತರಿಸುವ ಮೂಲಕ ಸರ್ಕಾರದ ಮೇಲೆ ಒತ್ತಡ ಹೇರಲು ಸಂಘಟನೆ ನಿರ್ಧರಿಸಿದೆ.




ಈ ಸಂದರ್ಭದಲ್ಲಿ ಮಾತನಾಡಿದ ಪೋಷಕರು, ಶಿಕ್ಷಣಾಧಿಕಾರಿಗಳಿಗೆ ಈಗಾಗಲೇ ಲಿಖಿತ ರೂಪದಲ್ಲಿ ಮನವಿ ಸಲ್ಲಿಸಲಾಗಿದ್ದು, ಯಾವುದೇ ಕಾರಣಕ್ಕೂ ಸಂಯೋಜಿತ ಶಾಲೆಗಳಿಗೆ ಮಕ್ಕಳನ್ನು ದಾಖಲಿಸುವುದಿಲ್ಲ ಎಂದು ದೃಢಪಡಿಸಿದ್ದಾರೆ.

ಈ ಹೋರಾಟದಲ್ಲಿ ಜಿಲ್ಲಾ ಕಾರ್ಯದರ್ಶಿ ಸುಷ್ಮಾ, ಸಾರ್ವಜನಿಕರಾದ ಶಾಂತಾ ಶೆಟ್ಟಿ, ಪುಟ್ಟರಾಜಪ್ಪ, ಹೆಚ್.ಆರ್. ರವಿಶಂಕರ್, ಧರ್ಮರಾಜು, ತಿಮ್ಮೇಗೌಡ ಸೇರಿದಂತೆ ಹಲವು ಗ್ರಾಮಗಳ ಎಸ್‌ಡಿಎಂಸಿ (SDMC) ಸದಸ್ಯರು ಮತ್ತು ಪೋಷಕರು ಭಾಗವಹಿಸಿದ್ದರು.

# ನ್ಯಾಯಯುತವಾಗಿ ಜನರಿಗೆ ಸವಲತ್ತುಗಳನ್ನು ದೊರಕಿಸಲು ಸೂಚನೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಸರ್ಕಾರದ ಯೋಜನೆಗಳನ್ನು ಅನುಷ್ಠಾನ ಮಾಡುವ ಮೂಲಕ ನ್ಯಾಯಯುತವಾಗಿ ಜನರಿಗೆ ಸವಲತ್ತುಗಳನ್ನು ದೊರಕಿಸಲು ಮುತುವರ್ಜಿವಹಿಸುವಂತೆ ಕರ್ನಾಟಕ ಬೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಡಾ.ಎಂ.ರಾಮಪ್ಪ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿಂದು ನಿಗಮದಿಂದ ಅನುಷ್ಠಾನವಾಗುತ್ತಿರುವ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು ಬೋವಿ ಅಭಿವೃದ್ಧಿ ನಿಗಮದಿಂದ ದೊರಕುವ ಸವಲತ್ತುಗಳ ಬಗ್ಗೆ ಹೆಚ್ಚಿನ ಪ್ರಚಾರ ಆಗಬೇಕು ಈ ನಿಟ್ಟಿನಲ್ಲಿ ಅಧಿಕಾರಿಗಳು ಕಾಳಜಿವಹಿಸಲು ಸೂಚಿಸಿದರು.

ಸರ್ಕಾರದ ಅನುದಾನ ವಾಪಸ್ ಹೋಗದಂತೆ ಕರ್ತವ್ಯ ನಿರ್ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ಸಾಲ ಸೌಲಭ್ಯ ಒದಗಿಸಲು ಲೀಡ್ ಬ್ಯಾಂಕ್ ಅಧಿಕಾರಿಗಳು ಫಲಾನುಭವಿಗಳಿಂದ ಸಿಬಿಲ್ ಹಾಗೂ ಸೆಕ್ಯುರಿಟಿ ಕೇಳಬಾರದು ಎಂದು ನಿರ್ದೇಶನ ನೀಡಿದರು.

ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆ ಬಾವಿ ಕೊರೆಯಲು ಕ್ರಮವಹಿಸುವಂತೆ ಹಾಗೂ ಉದ್ಯಮ ಶೀಲತಾ ಯೋಜನೆಯಡಿ ಮಹಿಳಾ ಸ್ವಸಹಾಯ ಸಂಘಗಳನ್ನು ರಚನೆ ಮಾಡಿ ಸಾಲ ಸೌಲಭ್ಯಗಳನ್ನು ಒದಗಿಸುವ ಮೂಲಕ ಆರ್ಥಿಕ ಅಭಿವೃದ್ಧಿಗೆ ಸಹಕರಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಸ್ವಾವಲಂಭಿ ಸಾರಥಿ ಯೋಜನೆಯಡಿ ಫಾಸ್ಟ್ ಫುಡ್ ಹಾಗೂ ಟ್ರಕ್ ಟ್ರೈಲರ್, ಮೊಬೈಲ್ ಕಿಚನ್‌ಗೆ ಸಹಾಯಧನವನ್ನು ಒದಗಿಸಲು ಕ್ರಮವಹಿಸುವಂತೆ ಅಧಿಕಾರಿಗಳಿಗೆ ನಿದೇಶನ ನೀಡಿದರು.

ಕರ್ನಾಟಕ ಬೋವಿ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಚಂದ್ರ ನಾಯಕ್ ಅವರು ಮಾತನಾಡಿ ಕರ್ನಾಟಕ ಬೋವಿ ಅಭಿವೃದ್ಧಿ ನಿಗಮದ ಯೋಜನೆಗಳ ಕುರಿತು ಸಮುದಾಯದವರಿಗೆ ಮಾಹಿತಿ ನೀಡುವುದರ ಜೊತೆಗೆ ಸವಲತ್ತುಗಳ ಬಳಕೆಗೆ ಪ್ರೇರೆಪಣೆ ನೀಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಮೈಕ್ರೋ ಕ್ರೆಡಿಟ್ ಯೋಜನೆಯಡಿ ಒಮ್ಮೆ ಸಾಲ ಪಡೆದು ತೀರುವಳಿ ಮಾಡಿದರೆ ಪುನಃ ಐದು ಲಕ್ಷ ಸಾಲ ನೀಡಲಾಗುವುದು ಈ ಸವಲತ್ತು ಬಳಸಿಕೊಂಡು ಆರ್ಥಿಕ ಸ್ಥಿತಿಯನ್ನು ವೃದ್ದಿಗೊಳಿಸಿಕೊಳ್ಳಲು ಸಹಾಯವಾಗುತ್ತದೆ ಎಂದರು.

ಫಲಾನುಭವಿಗಳ ಆಯ್ಕೆ ಮಾಡುವ ಸಂದರ್ಭದಲ್ಲಿ ಅಡಿಷನಲ್ ಲಿಸ್ಟ್ ತಯಾರಿ ಮಾಡಿ ಕೊಳ್ಳಿ ಅರ್ಹರಿಗೆ ಅವಕಾಶ ಕಲ್ಪಿಸಲು ತಿಳಿಸಿದರು. ಈ ಸಮುದಾಯದ ಜನರಿಗೆ ಸರ್ಕಾರದ ಸವಲತ್ತುಗಳು ತಲುಪಬೇಕು ಈ ನಿಟ್ಟಿನಲ್ಲಿ ಅಧಿಕಾರಿಗಳು ನಿಗಾವಹಿಸಬೇಕು ಎಂದರು.

ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ಮಾತನಾಡಿ ಸರ್ಕಾರ ದ ಅನುದಾನ ವಾಪಸ್ ಹೋದರೆ ಅಧಿಕಾರಿಗಳನ್ನೆ ಹೊಣೆ ಮಾಡಲಾಗುವುದು ಎಂದು ಹೇಳಿದರು. ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕರು ಹೆಚ್ಚಿನ ಜವಾಬ್ದಾರಿ ವಹಿಸಿಕೊಂಡು ಬೋವಿ ಕಾಲೋನಿಗಳಲ್ಲಿ ಅರಿವು ಮೂಡಿಸಿ ನಿಗಮದ ಯೋಜನೆಗಳ ಪ್ರಯೋಜನ ಪಡೆಯಲು ಜಾಗೃತಿ ಮೂಡಿಸಲು ನಿರ್ದೇಶನ ನೀಡಿದರು.

ಬೋವಿ ಸಮಾಜದ ಎಲ್ಲಾ ಮಕ್ಕಳನ್ನು ಕಡ್ಡಾಯವಾಗಿ ಶಾಲೆಗಳಿಗೆ ದಾಖಲು ಮಾಡಲು ಕ್ರಮವಹಿಸಲು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ನಿರ್ದೇಶನ ನೀಡಿದರು.

ಬೋವಿ ಸಮಾಜದ ಮಕ್ಕಳಿಗೆ ಹಾಸ್ಟೆಲ್‌ಗಳಲ್ಲಿ ಪ್ರವೇಶ ಕಲ್ಪಿಸಿ ಎಂದರಲ್ಲದೆ, ಬಾಲ್ಯ ವಿವಾಹ ತಡೆಯಲು ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಅವರು ಅಧಿಕಾರಿಗಳಿಗೆ ಸೂಚಿಸಿದರು.

# ಇಂದು ರಾಜ್ಯಕ್ಕೆ ಪ್ರಧಾನಿ ಮೋದಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೆಂಗಳೂರು : ಇಂದು ರಾಜ್ಯಕ್ಕೆ ಆಗಮಿಸುತ್ತಿರುವ ಪ್ರಧಾನಿ ನರೇಂದ್ರಮೋದಿ ಅವರು ಆರ್ಟ್ ಆಫ್ ಲಿವಿಂಗ್‌ನ ವರ್ಷಾಚರಣೆ, ರವಿಶಂಕರ್ ಗುರೂಜಿಯವರ ಹುಟ್ಟುಹಬ್ಬ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದಾರೆ. ಇದೇ ವೇಳೆ ಪ್ರಧಾನಿಗೆ ಎಚ್‌ಎಎಲ್ ವಿಮಾನ ನಿಲ್ದಾಣದಲ್ಲಿ ಬಿಜೆಪಿ ವತಿಯಿಂದ ಸನಾನ ಕಾರ್ಯಕ್ರಮ ಹಮಿಕೊಳ್ಳಲಾಗಿದೆ.

ಪ್ರಸಿದ್ಧ ಆಧ್ಯಾತ್ಮಿಕ ಕೇಂದ್ರವಾಗಿರುವ ಆರ್ಟ್ ಆಫ್ ಲಿವಿಂಗ್‌ನ 45ನೇ ವರ್ಷಾಚರಣೆ ಹಾಗೂ ರವಿಶಂಕರ್ ಗುರೂಜಿಯವರ 70ನೇ ವರ್ಷದ ಹುಟ್ಟುಹಬ್ಬ ಆಚರಣೆ ನೆರವೇರಲಿದೆ. ನಗರದ ಆರ್ಟ್ ಆಫ್ ಲಿವಿಂಗ್ ಆಶ್ರಮದಲ್ಲಿ ನಡೆಯಲಿದೆ.

ಆರ್ಟ್ ಆಫ್ ಲಿವಿಂಗ್‌ನ ಈ ನೂತನ ಧ್ಯಾನಮಂದಿರದಲ್ಲಿ ವಾರ್ಲಿ, ಮಧುಬನಿ, ಪಟ್ಟಚಿತ್ರ, ತಂಜಾವೂರು, ಸೋಹ್ರಾಹ್, ಕೊಹ್ಬರ್, ಗೊಂಡ್ ಮತ್ತು ಪಿಚ್ವಾಯಿ ಕಲೆಗಳನ್ನು ಬಳಕೆ ಮಾಡಲಾಗಿದ್ದು, ಈ ಸುಂದರ ಧ್ಯಾನ ಮಂದಿರದಲ್ಲಿ ಧ್ಯಾನ ಮಾಡಲು ಅಂದಿನಿಂದ ಅವಕಾಶ ಸಿಗಲಿದೆ.

ಮಾನಸಿಕ, ಆಧ್ಯಾತ್ಮಿಕ ಸಾಧನೆಗಳ ಮೂಲಕ ಜನರಿಗೆ ಮಾರ್ಗದರ್ಶನ ನೀಡುತ್ತಾ ಬಂದಿರುವ ಆರ್ಟ್ ಆಫ್ ಲಿವಿಂಗ್, 45 ವರ್ಷಗಳನ್ನು ಪೂರೈಸುತ್ತಿದ್ದು, ಮೇ 10 ರಿಂದ 25ರವರೆಗೆ ಹಲವು ಕಾರ್ಯಕ್ರಮಗಳು ನಡೆಯಲಿವೆ. ನಾನಾ ಕ್ಷೇತ್ರಗಳ ಗಣ್ಯರು ಸಂಭ್ರಮಾಚರಣೆಯಲ್ಲಿ ಭಾಗಿಯಾಗಲಿದ್ದಾರೆ.



ಆರ್ಟ್ ಆಫ್ ಲಿವಿಂಗ್ ಒಂದು ಅಂತರರಾಷ್ಟ್ರೀಯ ಲಾಭರಹಿತ, ಶೈಕ್ಷಣಿಕ ಮತ್ತು ಮಾನವೀಯ ಸೇವಾ ಸಂಸ್ಥೆಯಾಗಿದೆ.ಈ ಸಂಸ್ಥೆಯನ್ನು 1981 ರಲ್ಲಿ ಆಧ್ಯಾತ್ಮಿಕ ಗುರುಗಳಾದ ಶ್ರೀ ಶ್ರೀ ರವಿಶಂಕರ್ ಅವರು ಸ್ಥಾಪಿಸಿದರು. ಇದರ ಅಂತರರಾಷ್ಟ್ರೀಯ ಕೇಂದ್ರ (ಆಶ್ರಮ) ಕರ್ನಾಟಕದ ಬೆಂಗಳೂರಿನ ಕನಕಪುರ ರಸ್ತೆಯಲ್ಲಿದೆ. ಇದನ್ನು ಪಂಚಗಿರಿ (ಐದು ಬೆಟ್ಟಗಳ) ಮಡಿಲಲ್ಲಿ ನಿರ್ಮಿಸಲಾಗಿದೆ. ಒತ್ತಡ ಮುಕ್ತ ಮತ್ತು ಹಿಂಸಾಮುಕ್ತ ಸಮಾಜ ನಿರ್ಮಾಣ ಮಾಡುವುದು ಇದರ ಮುಖ್ಯ ಗುರಿಯಾಗಿದೆ. ಯಾವುದೇ ಜಾತಿ, ಧರ್ಮ, ಅಥವಾ ದೇಶದ ಭೇದವಿಲ್ಲದೆ, ಎಲ್ಲರನ್ನೂ ಒಳಗೊಂಡ ವಸುಧೈವ ಕುಟುಂಬಕಂ (ಇಡೀ ಜಗತ್ತೇ ಒಂದು ಕುಟುಂಬ) ಎಂಬ ತತ್ವವನ್ನು ಇದು ಪ್ರತಿಪಾದಿಸುತ್ತದೆ.

ಸುದರ್ಶನ ಕ್ರಿಯೆ ಆರ್ಟ್ ಆಫ್ ಲಿವಿಂಗ್‌ನ ಅತ್ಯಂತ ಪ್ರಮುಖವಾದ ಮತ್ತು ವಿಶಿಷ್ಟವಾದ ಉಸಿರಾಟದ ತಂತ್ರವಾಗಿದೆ. ಇದು ಉಸಿರಾಟದ ಮೂಲಕ ದೇಹ, ಮನಸ್ಸು ಮತ್ತು ಭಾವನೆಗಳನ್ನು ಸಮತೋಲನದಲ್ಲಿಡಲು ಸಹಾಯ ಮಾಡುತ್ತದೆ. ಇದರಿಂದ ಒತ್ತಡ, ಆತಂಕ ಮತ್ತು ಖಿನ್ನತೆ ದೂರವಾಗುತ್ತದೆ ಎಂದು ವೈಜ್ಞಾನಿಕವಾಗಿಯೂ ದೃಢಪಟ್ಟಿದೆ. ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕಾಗಿ ವಿವಿಧ ಯೋಗಾಸನಗಳು, ಪ್ರಾಣಾಯಾಮ ಮತ್ತು ಧ್ಯಾನ ಶಿಬಿರಗಳನ್ನು ಆಯೋಜಿಸುತ್ತದೆ.

ಆರ್ಟ್ ಆಫ್ ಲಿವಿಂಗ್ ಫೌಂಡೇಷನ್ ಕಳೆದ 45 ವರ್ಷಗಳಲ್ಲಿ ಯೋಗ, ಧ್ಯಾನ ಹಾಗೂ ಆಧ್ಯಾತ್ಮಿಕ ಶಿಕ್ಷಣದ ಜೊತೆಗೆ ಸಾಮಾಜಿಕ ಕಾರ್ಯಗಳಲ್ಲಿಯೂ ಮಹತ್ವದ ಪಾತ್ರವಹಿಸಿದೆ. ನದಿ ಪುನರುಜ್ಜೀವನ, ಶಿಕ್ಷಣ ಅಭಿವೃದ್ಧಿ ಮತ್ತು ವಿಪತ್ತು ನಿರ್ವಹಣೆ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಸಂಸ್ಥೆ ಕಾರ್ಯನಿರ್ವಹಿಸುತ್ತಿದೆ.

150ಕ್ಕೂ ಹೆಚ್ಚು ದೇಶಗಳಲ್ಲಿ ತನ್ನ ಚಟುವಟಿಕೆಗಳನ್ನು ವಿಸ್ತರಿಸಿರುವ ಈ ಸಂಸ್ಥೆ, ಮಾನವೀಯ ಮೌಲ್ಯಗಳ ಪ್ರಸಾರ ಹಾಗೂ ಸಮುದಾಯ ಸೇವೆಯಲ್ಲಿ ಪ್ರಮುಖ ಸ್ಥಾನವನ್ನು ಹೊಂದಿದೆ. ಎಕರೆ ಪ್ರದೇಶದಲ್ಲಿ ಹರಡಿಕೊಂಡಿರುವ ಧ್ಯಾನ ಮಂದಿರವು ಸ್ತಂಭ-ರಹಿತ ವಿಶಾಲ ಜಾಗವನ್ನು ಹೊಂದಿದ್ದು, ಇತರ ಸಾಮಾನ್ಯ ಕಟ್ಟಡಗಳಿಗಿಂತ ಭಿನ್ನವಾದ ಮೇಲ್ಚಾವಣಿಯನ್ನು ಅಳವಡಿಸಲಾಗಿದೆ. ಏಕಕಾಲಕ್ಕೆ ಸುಮಾರು 2 ಲಕ್ಷ ಜನರು ಸುರಕ್ಷಿತವಾಗಿ ಕುಳಿತುಕೊಳ್ಳುವಂತೆ ವಿನ್ಯಾಸಗೊಳಿಸಲಾಗಿದೆ. ಸಾಂಪ್ರದಾಯಿಕ ಒಳಾಂಗಣ ವಿನ್ಯಾಸದ ಬದಲಾಗಿ, ನೈಸರ್ಗಿಕ ಮತ್ತು ಸಂಸ್ಕರಿಸಿದ ಬಿದಿರನ್ನು ಬಳಸಿರುವುದು ಧ್ಯಾನ ಮಂದಿರದ ವಿಶೇಷತೆ.

45ನೇ ವಾರ್ಷಿಕೋತ್ಸವ ಮತ್ತು ಶ್ರೀ ಶ್ರೀ ಗುರೂಜಿ ಜನದಿನದ ಹಿನ್ನೆಲೆಯಲ್ಲಿ ಹಮಿಕೊಂಡಿರುವ ವಿವಿಧ ಕಾರ್ಯಕ್ರಮಗಳು ಮೇ 10 ರಂದು ಪ್ರಾರಂಭವಾಗಿ ಮೇ 25 ರವರೆಗೆ ನಡೆಯಲಿವೆ.

ಬೆಳಿಗ್ಗೆ 9 ಗಂಟೆಗೆ ಮೋದಿ ಅವರು, ಎಚ್‌ಎಎಲ್ ವಿಮಾನ ನಿಲ್ದಾಣಕ್ಕೆ ಆಗಮಿಸಲಿದ್ದು, ಕಾರ್ಯಕರ್ತರನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ಇನ್ನು ಕಾರ್ಯಕ್ರಮಕ್ಕೆ ಸುಮಾರು 10ರಿಂದ 15 ಸಾವಿರ ಜನರು ಸೇರುವ ನಿರೀಕ್ಷೆಯಿದೆ.

# ಆತ್ಮವಿಶ್ವಾಸ, ಶಿಸ್ತು-ನಿರಂತರ ಅಧ್ಯಯನವೇ ಯಶಸ್ಸಿನ ಗುಟ್ಟು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಆತ್ಮವಿಶ್ವಾಸ, ಶಿಸ್ತು ಹಾಗೂ ನಿರಂತರ ಅಧ್ಯಯನವನ್ನು ಜೀವನದ ಭಾಗವನ್ನಾಗಿಸಿಕೊಂಡಲ್ಲಿ ಯಾವುದೇ ಕ್ಷೇತ್ರದಲ್ಲೂ ಯಶಸ್ಸು ಸಾಧಿಸಬಹುದು ಎಂದು ಖ್ಯಾತ ವೈದ್ಯ ಡಾ. ಟಿ.ಹೆಚ್. ಅಂಜನಪ್ಪ ಕಿವಿಮಾತು ಹೇಳಿದರು.

ನಗರದ ಸರ್ಕಾರಿ ಕಲಾ, ವಾಣಿಜ್ಯ ಮತ್ತು ಸ್ನಾತಕೋತ್ತರ ಕಾಲೇಜುನಲ್ಲಿ ಆಯೋಜಿಸಿದ್ದ ಸಹಪಠ್ಯ ಚಟುವಟಿಕೆಗಳ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಅವರು, ''ಐ ಆಮ್ ದ ಬೆಸ್ಟ್'' ಎನ್ನುವ ಧನಾತ್ಮಕ ಚಿಂತನೆಯೇ ವ್ಯಕ್ತಿತ್ವ ವಿಕಸನದ ಮೊದಲ ಹೆಜ್ಜೆಯಾಗಿದೆ. ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನಲ್ಲಿರುವ ಸಾಮರ್ಥ್ಯವನ್ನು ಅರಿತುಕೊಂಡು ಆತ್ಮವಿಶ್ವಾಸದಿಂದ ಮುನ್ನಡೆಯಬೇಕು ಎಂದು ಸಲಹೆ ನೀಡಿದರು. ನಮ್ಮನ್ನು ನಾವು ನಂಬಿಕೊಳ್ಳುವ ಮನೋಭಾವ ಬೆಳೆಸಿಕೊಂಡರೆ ಬದುಕಿನ ಹಲವು ಸವಾಲುಗಳನ್ನು ಸುಲಭವಾಗಿ ಎದುರಿಸಬಹುದು. ಜೀವನದಲ್ಲಿ ಸಾಧನೆ ಮಾಡಲು ಕೇವಲ ಅಂಕಗಳು ಮಾತ್ರ ಸಾಲದು; ಉತ್ತಮ ನಡವಳಿಕೆ, ಮಾನವೀಯ ಮೌಲ್ಯಗಳು ಮತ್ತು ಸಮಾಜದ ಬಗ್ಗೆ ಕಾಳಜಿಯೂ ಅಗತ್ಯವಾಗಿದೆ. ವಿದ್ಯಾರ್ಥಿ ಜೀವನದಲ್ಲಿ ಓದು ಮತ್ತು ಅಧ್ಯಯನಕ್ಕೆ ಪರ್ಯಾಯವೇ ಇಲ್ಲ. ಪ್ರತಿದಿನ ಹೊಸ ವಿಷಯಗಳನ್ನು ಕಲಿಯುವ ಅಭ್ಯಾಸ ಬೆಳೆಸಿಕೊಳ್ಳಬೇಕು. ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣಗಳ ಅತಿಯಾದ ಬಳಕೆ ವಿದ್ಯಾರ್ಥಿಗಳ ಭವಿಷ್ಯಕ್ಕೆ ಅಡ್ಡಿಯಾಗಬಹುದು. ಆದ್ದರಿಂದ ಸಮಯದ ಮೌಲ್ಯವನ್ನು ಅರಿತು ಶಿಸ್ತಿನಿಂದ ಬದುಕಬೇಕು ಎಂದು



ಕಿವಿಮಾತು ಹೇಳಿದರು. ಇದೇ ವೇಳೆ ಆರೋಗ್ಯದ ಮಹತ್ವವನ್ನು ವಿವರಿಸಿದ ಅವರು, ವಿದ್ಯಾರ್ಥಿಗಳು ದೈಹಿಕ ಹಾಗೂ ಮಾನಸಿಕ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಸಲಹೆ ನೀಡಿದರು. ತುರ್ತು ಸಂದರ್ಭಗಳಲ್ಲಿ ಅನುಸರಿಸಬೇಕಾದ ಆರೋಗ್ಯ ಸುರಕ್ಷತಾ ಕ್ರಮಗಳು, ಸಾಮಾನ್ಯ ಕಾಯಿಲೆಗಳ ಬಗ್ಗೆ ಜಾಗೃತಿ ಹಾಗೂ ಪ್ರಾಥಮಿಕ ಚಿಕಿತ್ಸೆ ಕುರಿತಂತೆ ಉಪಯುಕ್ತ ಮಾಹಿತಿಯನ್ನು ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ''ವರ್ಷದ ವ್ಯಕ್ತಿ'' ಗೌರವ ಸ್ವೀಕರಿಸಿ ಮಾತನಾಡಿದ ಖ್ಯಾತ ಸ್ತ್ರೀರೋಗ ತಜ್ಞೆ ಡಾ. ಸಾವಿತ್ರಿ, ಇಂದಿನ ಹದಿಹರೆಯದವರು ವಯಸ್ಸಿನ ಆಕರ್ಷಣೆಗೆ ಒಳಗಾಗಿ ದಾರಿ ತಪ್ಪುತ್ತಿರುವುದು ಸಮಾಜಕ್ಕೆ ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ವಿಷಾದ ವ್ಯಕ್ತಪಡಿಸಿದರು. ಯುವಜನತೆ ತಮ್ಮ ಗುರಿಯನ್ನು ಮರೆಯದೆ ಶಿಸ್ತುಬದ್ಧ ಜೀವನ ನಡೆಸಬೇಕು. ಕ್ಷಣಿಕ ಆಕರ್ಷಣೆಗಳಿಗೆ ಮಾರುಹೋಗದೆ ಶಿಕ್ಷಣ ಮತ್ತು ವ್ಯಕ್ತಿತ್ವ ನಿರ್ಮಾಣದತ್ತ ಗಮನ ಹರಿಸಬೇಕು. ಅನಾರೋಗ್ಯಕರ ಜೀವನಶೈಲಿಯಿಂದ ಗಂಭೀರ ಲೈಂಗಿಕ ರೋಗಗಳಿಗೆ ತುತ್ತಾಗುವ ಸಾಧ್ಯತೆಗಳಿದ್ದು, ಈ ಬಗ್ಗೆ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಬೇಕಾಗಿದೆ ಎಂದು ಹೇಳಿದರು. ಸರಳ ಜೀವನ, ಉತ್ತಮ ಸಂಸ್ಕಾರ ಮತ್ತು ಮೌಲ್ಯಾಧಾರಿತ ಬದುಕು ಪ್ರತಿಯೊಬ್ಬ ವಿದ್ಯಾರ್ಥಿಯ ವ್ಯಕ್ತಿತ್ವವನ್ನು ಉನ್ನತ ಮಟ್ಟಕ್ಕೆ ಕೊಂಡೊಯ್ಯುತ್ತದೆ. ಪೋಷಕರು ಹಾಗೂ ಶಿಕ್ಷಕರ ಮಾರ್ಗದರ್ಶನವನ್ನು ಗೌರವಿಸಿ ಉತ್ತಮ ನಾಗರಿಕರಾಗಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ರಾಜು ಡಿ.ಎಸ್. ಮಾತನಾಡಿ, ಗ್ರಾಮೀಣ ಭಾಗದ ವಿದ್ಯಾರ್ಥಿಗಳಲ್ಲಿಯೂ ಅಪಾರ ಪ್ರತಿಭೆ ಅಡಗಿದ್ದು, ಸರಿಯಾದ ಮಾರ್ಗದರ್ಶನ ಹಾಗೂ ಪರಿಶ್ರಮದಿಂದ ಅವರು ಉನ್ನತ ಹುದ್ದೆಗಳನ್ನು ಅಲಂಕರಿಸಬಹುದು ಎಂದರು. ಕಾಲೇಜು ಕೇವಲ ಪಾಠ ಕಲಿಸುವ ಕೇಂದ್ರವಲ್ಲ, ವಿದ್ಯಾರ್ಥಿಗಳ ವ್ಯಕ್ತಿತ್ವ ರೂಪಿಸುವ ಪವಿತ್ರ ವೇದಿಕೆಯಾಗಿದೆ. ಶಿಕ್ಷಣದ ಜೊತೆಗೆ ಸಾಂಸ್ಕೃತಿಕ, ಕ್ರೀಡಾ ಹಾಗೂ ಸಾಮಾಜಿಕ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣಗಳು ಬೆಳೆಯುತ್ತವೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಕಳೆದ ಶೈಕ್ಷಣಿಕ ಸಾಲಿನಲ್ಲಿ ಅತ್ಯುತ್ತಮ ಅಂಕ ಪಡೆದ ವಿದ್ಯಾರ್ಥಿಗಳನ್ನು ನಗದು ಬಹುಮಾನ ನೀಡಿ ಸನ್ಮಾನಿಸಲಾಯಿತು. ಎನ್‌ಎಸ್‌ಎಸ್ ಘಟಕದಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳು, ಸಾಂಸ್ಕೃತಿಕ ಸ್ಪರ್ಧೆಗಳು ಹಾಗೂ ಕ್ರೀಡಾಕೂಟಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಪ್ರಶಸ್ತಿ ಸ್ವೀಕರಿಸಿದ ವಿದ್ಯಾರ್ಥಿಗಳಲ್ಲಿ ಸಂತಸ ಮನೆಮಾಡಿತ್ತು.

ಸಾಂಸ್ಕೃತಿಕ ವೇದಿಕೆ ಸಂಚಾಲಕರಾದ ಡಾ. ಬಸವೇಗೌಡ ಕಾರ್ಯಕ್ರಮದ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿ, ಕಾಲೇಜಿನಲ್ಲಿ ವಿದ್ಯಾರ್ಥಿಗಳ ಸರ್ವಾಂಗೀಣ ಬೆಳವಣಿಗೆಗೆ ವಿವಿಧ ಸಹಪಠ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಶೈಕ್ಷಣಿಕ ಡೀನ್ ಡಾ. ಹರೀಶ್ ಎಂ.ಕೆ., ಪರೀಕ್ಷಾ ನಿಯಂತ್ರಕರಾದ ಡಾ. ಮುರಳೀಧರ ಕೆ.ಡಿ., ಯುವ ರೆಡ್ ಕ್ರಾಸ್ ಸಂಚಾಲಕ ಹೆಚ್.ಡಿ. ದೇವರಾಜು, ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮಾಧಿಕಾರಿ ಕೆ.ವಿ. ಪ್ರಾರ್ಥೇಶ್, ಮಹಾಲಿಂಗಪ್ಪ, ಸ್ಕೌಟ್ ಅಂಡ್ ಗೈಡ್ಸ್ ರೇಂಜರ್ಸ್ ಅಂಡ್ ರೋವರ್ಸ್ ಘಟಕದ ಡಾ. ಸುರೇಶ್, ಡಾ. ಪ್ರಮೀಳ ವಿವಿಧ ಸಮಿತಿಗಳ ಸಂಚಾಲಕರು, ಉಪನ್ಯಾಸಕರು, ವಿದ್ಯಾರ್ಥಿಗಳು ಹಾಗೂ ಪೋಷಕರು ಉಪಸ್ಥಿತರಿದ್ದರು. ಡಾ. ಸವಿತಾ ಸ್ವಾಗತಿಸಿದರು. ಡಾ. ಗೋಪಾಲ್ ಕಾರ್ಯಕ್ರಮ ನಿರೂಪಿಸಿದರು. ಡಾ. ಮಹೇಶ್ ವಂದಿಸಿದರು.

# ರಾಜ್ಯದಲ್ಲಿ ಪರೀಕ್ಷೆ ಮೌಲ್ಯಮಾಪನಕ್ಕೂ ಎ.ಐ ತಂತ್ರಜ್ಞಾನ ಬಳಕೆಗೆ ಸಿದ್ಧತೆ



ಬೆಂಗಳೂರು: ಸ್ಮಾರ್ಟ್ ಕ್ಲಾಸ್, ಆನ್‌ಲೈನ್ ತರಗತಿಗಳ ಮೂಲಕ ತಂತ್ರಜ್ಞಾನದ ಸ್ಪರ್ಶ ಪಡೆದಿದ್ದ ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಇನ್ಮುಂದೆ ವಿದ್ಯಾರ್ಥಿಗಳ ಪರೀಕ್ಷೆಗಳ ಮೌಲ್ಯಮಾಪನಕ್ಕೂ ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಬಳಸಿಕೊಳ್ಳಲು ಶಿಕ್ಷಣ ಇಲಾಖೆ ಮುಂದಾಗಿದೆ.

ಇದರ ಭಾಗವಾಗಿ 8 ರಿಂದ 12ನೇ ತರಗತಿ ವಿದ್ಯಾರ್ಥಿಗಳ ಪಠ್ಯ ಆಧಾರಿತ ಪರೀಕ್ಷೆಗಳ ಮೌಲ್ಯಮಾಪನಕ್ಕೆ ಎಐ ತಂತ್ರಜ್ಞಾನ ಬಳಸಲು ಶಿಕ್ಷಣ ಇಲಾಖೆ ಸಿದ್ಧತೆ ನಡೆಸಿದೆ. ವಿದ್ಯಾರ್ಥಿಗಳ ಕಲಿಕಾ ಸಾಮರ್ಥ್ಯ ತಿಳಿಯಲು ಸರ್ಕಾರಿ ಶಾಲೆಗಳಲ್ಲಿ ಪಠ್ಯ ಆಧಾರಿತ ಪರೀಕ್ಷೆ ನಡೆಸಲಾಗುತ್ತಿದೆ.

ಪ್ರತಿ ಪರೀಕ್ಷೆ ಬಳಿಕ ಉತ್ತರ ಪತ್ರಿಕೆಗಳ ಮೌಲ್ಯಮಾಪನ, ಡೇಟಾ ಸಂಗ್ರಹಕ್ಕೆ ಶಿಕ್ಷಕರಿಗೆ ಸಾಕಷ್ಟು ಸಮಯ ಬೇಕಾಗುತ್ತಿದ್ದು, ಇದರಿಂದಾಗಿ ಈ ಸಮಯದಲ್ಲಿ ತರಗತಿಗಳ ಪಾಠ-ಪ್ರವಚನಕ್ಕೆ ಅಡೆತಡೆ ಎದುರಾಗದಂತೆ ಶೀಘ್ರ ಮೌಲ್ಯಮಾಪನ ನಡೆಸಲು ಎಐ ತಂತ್ರಜ್ಞಾನ ನೆರವಾಗಲಿದೆ. ಐಐಟಿ ಧಾರವಾಡದ ಮೂಲಕ ಮೌಲ್ಯಮಾಪನಕ್ಕೆ ಎಐ ಆಧಾರಿತ ತಂತ್ರಜ್ಞಾನ ಸಿದ್ಧಪಡಿಸುತ್ತಿರುವ ಶಿಕ್ಷಣ ಇಲಾಖೆ, ಮುಂದಿನ ಶೈಕ್ಷಣಿಕ ವರ್ಷದಿಂದ ಇದನ್ನು ಜಾರಿಗೆ ತರಲು ತಯಾರಿ ನಡೆಸಿದೆ.ಎಐ ತಂತ್ರಜ್ಞಾನದ ಮೂಲಕ ಒಂದೇ ಬಾರಿಗೆ 1.5 ಮಿಲಿಯನ್ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನ ಮಾಡುವ ಸಾಮರ್ಥ್ಯವಿದೆ.

ಈ ಹೊಸ ತಂತ್ರಜ್ಞಾನದಲ್ಲಿ ಶಿಕ್ಷಕರು ಮಕ್ಕಳ ಉತ್ತರ ಪತ್ರಿಕೆಗಳನ್ನು ಫೋಟೋ ತೆಗೆದು ಅಥವಾ ಸ್ಕ್ಯಾನ್ ಮಾಡುವ ಮೂಲಕ ಆಪ್‌ನಲ್ಲಿ ದಾಖಲಿಸಬೇಕಾಗುತ್ತದೆ. ಉತ್ತರ ಪತ್ರಿಕೆಗಳನ್ನು ಪರಿಶೀಲಿಸಿ ಅಂಕಗಳನ್ನು ನೀಡುವ ಜತೆಗೆ, ದತ್ತಾಂಶ ಸಂಗ್ರಹಿಸುವ ಕೆಲಸವನ್ನು ತಂತ್ರಜ್ಞಾನ ನಿರ್ವಹಿಸಲಿದೆ. ಶೀಘ್ರವಾಗಿ ನಿಖರ ಫಲಿತಾಂಶ ಸಿಗುವುದರಿಂದ ಶಿಕ್ಷಕರಿಗೆ ಮೌಲ್ಯಮಾಪನದ ಹೊರೆ ತಗ್ಗಲಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201
and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248